# ಸಮಾಜ ಕಲ್ಯಾಣ ಇಲಾಖೆ

## ವಾರ್ಷಿಕ ವರದಿ
## 2017–18

ಕರ್ನಾಟಕ ಸರ್ಕಾರದ ಸಚಿವಾಲಯ
ಬೆಂಗಳೂರು.

ಪರಿವಿಡಿ


| ಕ್ರ.ಸಂ | ಇಲಾಖೆಗಳು | ಪುಟ ಸಂಖ್ಯೆ |
|---|---|---|
| 1. | ಸಮಾಜ ಕಲ್ಯಾಣ ಇಲಾಖೆ | 1–128 |
| 2. | ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ | 129–157 |
| 3. | ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ | 158–163 |
| 4. | ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ | 164–172 |
| 5 | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ | 173–188 |
| 6. | ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ | 189–192 |
| 7. | ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ | 193–198 |
| 8. | ಕೇಂದ್ರ ಪರಿಹಾರ ಸಮಿತಿ | 199–203 |
| 9. | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ | 204–314 |
| 10. | ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು. | 315–324 |
| 11. | ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ. | 325–329 |
| 12. | ಕರ್ನಾಟಕ ಬೋವಿ ಅಭಿವೃದ್ಧಿ ನಿಗಮ. | 330–333 |
| 13. | ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ | 334 |

# ಸಮಾಜ ಕಲ್ಯಾಣ ಇಲಾಖೆ

## 2017-18ನೇ ಸಾಲಿನ ವಾರ್ಷಿಕ ವರದಿ

## ಇಲಾಖೆಯ ಉದ್ದೇಶ

ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿಯವರ ಕಲ್ಯಾಣಕ್ಕಾಗಿ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೊಳಿಸುತ್ತಿದೆ. ಪರಿಶಿಷ್ಟ ಜಾತಿಯವರ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ಅಭಿವೃದ್ದಿಗಳಿಗೆ ಸಂಬಂಧಿಸಿದಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತ, ಪರಿಶಿಷ್ಟ ಜಾತಿಯ ಜನಾಂಗದವರನ್ನು ಸರ್ವತೋಮುಖ ಅಭಿವೃದ್ಧಿಗೊಳಿಸುವ ಉದ್ದೇಶವನ್ನು ಹೊಂದಿರುತ್ತದೆ.

**1) ಆಡಳಿತ ವ್ಯವಸ್ಥೆ:**

**(ಅ) ರಾಜ್ಯಮಟ್ಟದಲ್ಲಿ:**

ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಈ ಇಲಾಖೆಯ ಮುಖ್ಯಸ್ಥರಾಗಿದ್ದು, ಇವರ ಸಹಾಯಕ್ಕೆ ಮೂರು ಜಂಟಿ ನಿರ್ದೇಶಕರು, ಐದು ಉಪ ನಿರ್ದೇಶಕರು, ಒಬ್ಬ ಮುಖ್ಯ ಲೆಕ್ಕಾಧಿಕಾರಿ ಮತ್ತು ಸಹಾಯಕ ನಿರ್ದೇಶಕರು, (ಸಾಂಖ್ಯಿಕ ಮತ್ತು ಸಂಶೋಧನೆ) ಹಾಗೂ ಸಹಾಯಕ ಕಾನೂನು ಅಧಿಕಾರಿ (ನ್ಯಾಯಾಂಗ ಕೇಸುಗಳ ವಿಲೇವಾರಿ) ಇವರು ಕೇಂದ್ರಸ್ಥಾನದಲ್ಲಿ ಇರುತ್ತಾರೆ.

ಸಮಾಜ ಕಲ್ಯಾಣ ಇಲಾಖೆಯಿಂದ ಒಂದು ಪರೀಕ್ಷಾ ಪೂರ್ವ ತರಬೇತಿ ಕೇಂದ್ರವನ್ನು ಬೆಂಗಳೂರಿನಲ್ಲಿ ನಡೆಸಲಾಗುತ್ತಿದೆ. ಇದರ ಮುಖ್ಯಸ್ಥರಾಗಿ ಇಲಾಖೆಯಲ್ಲಿ ಉಪ ನಿರ್ದೇಶಕರ ವೃಂದದವರು ಪ್ರಾಂಶುಪಾಲರಾಗಿ ಕಾರ್ಯ ಕಾರ್ಯನಿರ್ವಹಿಸುತ್ತಿದ್ದಾರೆ. ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಅಂಬೇಡ್ಕರ್ ಭವನ, ಬೆಂಗಳೂರು ಇಲ್ಲಿ ನಾಗರೀಕ ಸೇವೆಗಳಾದ, ಭಾರತೀಯ ಆಡಳಿತ ಸೇವೆ, ಕರ್ನಾಟಕ ಆಡಳಿತ ಸೇವೆಯ ಸ್ಪರ್ಧಾತ್ಮಕ ಪರೀಕ್ಷೆಗಳು, ಲೋಕಸೇವಾ ಆಯೋಗ ಹಾಗೂ ಬ್ಯಾಂಕಿಂಗ್ ಪರೀಕ್ಷೆಯನ್ನೊಳಗೊಂಡಂತೆ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಇಚ್ಛಿಸುವ ಪರಿಶಿಷ್ಟ ಜಾತಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಉಚಿತವಾಗಿ ತರಬೇತಿಗಳನ್ನು ನೀಡಲಾಗುತ್ತಿದೆ.

**(ಆ) ಜಿಲ್ಲಾ ಮಟ್ಟ:**

ಜಿಲ್ಲಾ ಮಟ್ಟದಲ್ಲಿ ಜಂಟಿ ನಿರ್ದೇಶಕರು / ಉಪ ನಿದೇರ್ಶಕರುಗಳು ಮುಖ್ಯಸ್ಥರಾಗಿದ್ದು ಇವರು ಇಲಾಖೆಗೆ ಸಂಬಂಧಿಸಿದ ಎಲ್ಲಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಮೇಲ್ವಿಚಾರಣೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.

**(ಇ) ತಾಲ್ಲೂಕು ಮಟ್ಟ:**

176 ತಾಲ್ಲೂಕುಗಳಲ್ಲಿ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್-1 / ಗ್ರೇಡ್-2 ಮುಖ್ಯಸ್ಥರಾಗಿದ್ದು, ಇತರೆ ಸಿಬ್ಬಂದಿಗಳೊಂದಿಗೆ ಇಲಾಖೆಯ ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಿರುತ್ತಾರೆ. ಪರಿಶಿಷ್ಟ ಜಾತಿಯ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಇಲಾಖೆಯಲ್ಲಿ ಸೃಜಿಸಲಾಗಿರುವ ಸಿಬ್ಬಂದಿಗಳ ವಿವರ ದಿನಾಂಕ: 31-12-2017 ರಲ್ಲಿದ್ದಂತೆ ಕೆಳಗೆ ತೋರಿಸಲಾಗಿದೆ.